ಪಟ್ಟಿ-೦೭

ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು - ೧೫

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತ ನಾಲ್ಕನೇ ಅಧಿವೇಶನ

## ಬುಧವಾರ, ದಿನಾಂಕ: ೨೧ನೇ ಫೆಬ್ರವರಿ, ೨೦೧೮

---

### ಸಮೂಹ - III

೧. ಕಂದಾಯ ಸಚಿವರು.
೨. ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು.
೩. ಅರಣ್ಯ ಸಚಿವರು.
೪. ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು.
೫. ಕಾರ್ಮಿಕ ಸಚಿವರು.
೬. ವಸತಿ ಸಚಿವರು.
೭. ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ಸಚಿವರು

---

### ಸ್ಮಶಾನಗಳು ಮತ್ತು ಮೂಲಭೂತ ಸೌಕರ್ಯಗಳ ಬಗ್ಗೆ

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) -**

೯೧ (೫೧೬) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದಲ್ಲಿರುವ ಒಟ್ಟು ಹಳ್ಳಿಗಳು, ಪಟ್ಟಣಗಳು ಮತ್ತು ನಗರ ಪ್ರದೇಶಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಸರ್ಕಾರ ಈ ಎಲ್ಲಾ ಪ್ರದೇಶಗಳಲ್ಲಿ ಸ್ಮಶಾನ ಸೌಲಭ್ಯವನ್ನು ಕಲ್ಪಿಸಲಾಗಿದೆಯೇ; ಹಾಗಿದ್ದಲ್ಲಿ, ಸ್ಮಶಾನವೊಂದಕ್ಕೆ ಎಷ್ಟು ಎಕರೆ ಜಮೀನನ್ನು ಮೀಸಲಿಡಲಾಗಿದೆ; ಯಾವ ಯಾವ ಮೂಲ ಸೌಕರ್ಯಗಳನ್ನು ಒದಗಿಸಲಾಗಿದೆ ; (ವಿವರ ನೀಡುವುದು)

(ಇ) ಯಾವ ಯಾವ ಸ್ಥಳಗಳಲ್ಲಿ ಜಾತಿ, ಧರ್ಮವಾರು ಸ್ಮಶಾನಗಳನ್ನು ನಿರ್ಮಿಸಲಾಗಿದೆ ; ಅವು ಯಾವುವು ? (ವಿವರ ನೀಡುವುದು)

## ಬಂಡೀಪುರ ಮತ್ತು ನಾಗರಹೊಳೆ ಅರಣ್ಯ ಸಂರಕ್ಷಣೆಯ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) –**

೯೨ (೫೨೦) ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬಂಡೀಪುರ ಮತ್ತು ನಾಗರಹೊಳೆ ಅರಣ್ಯ ಸಂರಕ್ಷಣೆಗೆ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ಇದರಲ್ಲಿ ಭರ್ತಿಯಾಗಿರುವ ಮತ್ತು ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಇ) ಖಾಲಿ ಇರುವ ಹುದ್ದೆಗಳು ಎಷ್ಟು ದಿನಗಳಿಂದ ಖಾಲಿ ಇವೆ ;

(ಈ) ಅಗತ್ಯ ಸಿಬ್ಬಂದಿಗಳ ಕೊರತೆ ಇರುವುದರಿಂದ ಕಾಡಿನ ರಕ್ಷಣೆ ಕಷ್ಟವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ಅರಣ್ಯ ಸಂರಕ್ಷಣೆಗೆ ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಊ) ಈ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು; ಯಾವಾಗ ಭರ್ತಿ ಮಾಡಲಾಗುವುದು ? (ವಿವರ ನೀಡುವುದು)

## ಭಾರಿ ಮತ್ತು ಮಧ್ಯಮ ನೀರಾವರಿ ಇಲಾಖೆಗೆ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಅನುದಾನ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೯೩ (೫೦೬) ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೨೦೧೪ನೇ ಸಾಲಿನಿಂದ ಇಲ್ಲಿಯವರೆಗೆ ರಾಜ್ಯದ ಬೃಹತ್ ಮತ್ತು ಮಧ್ಯಮ ನೀರಾವರಿ ಇಲಾಖೆಗೆ ಯಾವ ಯಾವ ಯೋಜನೆಗಳಿಗಾಗಿ ಕೇಂದ್ರ ಸರ್ಕಾರದಿಂದ ಹಣ ಬಿಡುಗಡೆಯಾಗಿದೆ ; ಬಿಡುಗಡೆಯಾದ ಹಣವೆಷ್ಟು ;

(ಆ) ಬಿಡುಗಡೆಯಾದ ಹಣದಲ್ಲಿ ಯಾವ ಯಾವ ಯೋಜನೆಗಳಿಗೆ ಎಷ್ಟು ಹಣವನ್ನು ಖರ್ಚು ಮಾಡಲಾಗಿದೆ ;

(ಇ) ಯೋಜನೆಗಳ ವಿವರ ಮತ್ತು ಬಳಕೆಯ ಸಂಪೂರ್ಣ ಜಿಲ್ಲಾವಾರು ಮಾಹಿತಿ ನೀಡುವುದು ?

## ಒಳಾಂಗಣ ಕ್ರೀಡಾಂಗಣದ ಪರಿಸ್ಥಿತಿ ಹದಗೆಟ್ಟಿರುವ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)** –

೯೪ (೮೬೯) ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರಿನಲ್ಲಿರುವ ಒಳಾಂಗಣ ಕ್ರೀಡಾಂಗಣದ ವ್ಯವಸ್ಥೆ ಹದಗೆಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಒಳಾಂಗಣ ಕ್ರೀಡಾಂಗಣವನ್ನು ವಾಣಿಜ್ಯ ಚಟುವಟಿಕೆಗಳಿಗೆ ಬಾಡಿಗೆಗೆ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಅದರಿಂದ ಬರುವ ಆದಾಯವನ್ನು ಕ್ರೀಡಾಂಗಣದ ಅಭಿವೃದ್ಧಿಗೆ ಉಪಯೋಗಿಸಲಾಗುತ್ತಿದೆಯೇ ?

## ಶಿವಮೊಗ್ಗ ತಾಲ್ಲೂಕು ನಗರದ ಸಮೀಪವಿರುವ ನವಲೆಕೆರೆ ಬಗ್ಗೆ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು)** –

೯೫ (೮೯೦) ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಶಿವಮೊಗ್ಗ ನಗರದ ಸಮೀಪವಿರುವ ನವಲೆಕೆರೆ ಸರ್ಕಾರದ ದಾಖಲೆ ಪ್ರಕಾರ ಇರುವ ವಿಸ್ತೀರ್ಣವೆಷ್ಟು ; ಹಾಲಿ ಉಳಿದಿರುವುದು ಎಷ್ಟು ; (ವಿವರ ನೀಡುವುದು)

(ಆ) ಕೆ.ಎಸ್.ಸಿ.ಎ. ಕ್ರೀಡಾಂಗಣಕ್ಕೆ ಈ ಪೈಕಿ ಕೊಟ್ಟಿರುವ ವಿಸ್ತೀರ್ಣವೆಷ್ಟು ; ಲೀಸ್/ಖರೀದಿಗೆ ನೀಡಲಾಗಿದೆಯೇ ; ಹಾಗಿದ್ದಲ್ಲಿ, ಎಷ್ಟು ವರ್ಷಗಳಿಗೆ ಲೀಸ್ ನೀಡಲಾಗಿದೆ ; ಹಾಗೂ ಮೊತ್ತವೆಷ್ಟು ; ಖರೀದಿಗಾದಲ್ಲಿ ಎಷ್ಟು ಮೊತ್ತಕ್ಕೆ ನೀಡಲಾಗಿದೆ ; (ವಿವರ ನೀಡುವುದು)

(ಇ) ಈಗಿರುವಂತಹ ಕೆರೆ ಅಂಗಳವನ್ನು ಬಳಸಿಕೊಂಡು ರಸ್ತೆ ಅಭಿವೃದ್ಧಿಪಡಿಸಲು ಎಷ್ಟು ವಿಸ್ತೀರ್ಣ ಪ್ರದೇಶವನ್ನು ಬಳಸಲಾಗುತ್ತಿದೆ ; (ವಿವರ ನೀಡುವುದು)

(ಈ) ಉಳಿದಿರುವಂತಹ ಕೆರೆ ಅಂಗಳದ ಪ್ರದೇಶವನ್ನು ಇನ್ಯಾವ ಉದ್ದೇಶಗಳಿಗೆ ಬಳಸಲು ಉದ್ದೇಶಿಸಲಾಗಿದೆ ? (ವಿವರ ನೀಡುವುದು)

## ಕೆರೆಗಳ ಅಭಿವೃದ್ಧಿ ಬಗ್ಗೆ

**ಶ್ರೀ ರಘುನಾಥ್‌ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು)–**

೯೬ (೫೨೧) ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೀದರ್ ಜಿಲ್ಲೆಯಲ್ಲಿರುವ ಕೆರೆಗಳ ಸಂಖ್ಯೆ ಎಷ್ಟು ; ಮತ್ತು ಅವುಗಳ ವಿಸ್ತೀರ್ಣ ಎಷ್ಟು ; (ಕೆರೆಗಳವಾರು, ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಕೆರೆಗಳಲ್ಲಿ ಎಷ್ಟು ಕೆರೆಗಳು ರೈತರ ನೀರಾವರಿಗೆ ಎಷ್ಟರ ಮಟ್ಟಿಗೆ ಸಹಾಯಕಾರಿಯಾಗಿವೇ ; ಸಹಾಯಕಾರಿಯಾಗಿದ್ದಲ್ಲಿ, ಸಂಪೂರ್ಣ ಮಾಹಿತಿ ನೀಡುವುದು)

(ಇ) ಈ ಕೆರೆಗಳ ಪೈಕಿ ಎಷ್ಟು ಕೆರೆಗಳಲ್ಲಿ ನೀರಿದೆ ; ನೀರಿಲ್ಲದೆ ಇರುವ ಕೆರೆಗಳ ಸಂಖ್ಯೆ ಎಷ್ಟು , ಯಾವ ಯಾವ ಕೆರೆಗಳಲ್ಲಿ ಎಷ್ಟು ಪ್ರಮಾಣದ ನೀರು/ಎಷ್ಟು ದಿನಗಳವರೆಗೆ ಸಂಗ್ರಹವಾಗಿರುತ್ತದೆ ; (ಅಂಕಿ–ಅಂಶಗಳೊಂದಿಗೆ ಸ್ಪಷ್ಟ ಮಾಹಿತಿ ನೀಡುವುದು)

(ಈ) ಈ ಕೆರೆಗಳಲ್ಲಿ ಹೂಳು ತುಂಬಿರುವ ಕೆರೆಗಳೆಷ್ಟು ; ಹೂಳು ತೆಗೆಯಲಾಗಿರುವ ಕೆರೆಗಳೆಷ್ಟು ; ಇದಕ್ಕಾಗಿ ಕಳೆದ ೫ ವರ್ಷಗಳಲ್ಲಿ ಬಿಡುಗಡೆ, ಖರ್ಚು ಮಾಡಿರುವ ಅನುದಾನದ ಮೊತ್ತವೆಷ್ಟು ; (ಪ್ರತ್ಯೇಕ ಕೆರೆಗಳವಾರು, ಲೆಕ್ಕಶೀರ್ಷಿಕೆಗಳವಾರು, ವರ್ಷಾವಾರು ಸ್ಪಷ್ಟ ಮಾಹಿತಿ ನೀಡುವುದು)

(ಉ) ಈ ಕೆರೆಗಳ ಅಭಿವೃದ್ಧಿಗಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳಾವುವು ? (ತಾಲ್ಲೂಕುವಾರು, ವಿವರ ನೀಡುವುದು)

## ಹಾವೇರಿ ಜಿಲ್ಲೆ, ಸವಣೂರು ತಾಲ್ಲೂಕು ತಹಶೀಲ್ದಾರರ ಕಾರ್ಯಾಲಯದ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು)–**

೯೭ (೮೮೨) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಹಾವೇರಿ ಜಿಲ್ಲೆ, ಸವಣೂರು ತಾಲ್ಲೂಕು ತಹಶೀಲ್ದಾರರ ಕಾರ್ಯಾಲಯದಲ್ಲಿ ೨೦೦೦ನೇ ಸಾಲಿನಿಂದ ರೈತರಿಗೆ ಬೇಕಾದ ಕಾಗದ ಪತ್ರ, ಉತಾರ/ಡ/ಹಳೇಶರ್ತು ಇವುಗಳನ್ನು ನೀಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರೈತರ ಹಳೇಶರ್ತು ಮಾಡಲಿಕ್ಕೆ/ಬ್ಯಾಂಕ್ ಸಾಲ ತೆಗೆಸಲಿಕ್ಕೆ ಯಾವುದೇ ಕಾಗದ ಪತ್ರ ಸಿಗದೇ ನಮ್ಮಲ್ಲಿ ಲಭ್ಯವಿಲ್ಲವೆಂದು ಮಾಹಿತಿ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಇದರಿಂದ ರೈತರಿಗಾಗುವ ತೊಂದರೆ ತಪ್ಪಿಸಲಿಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು?

## ಅತಿವೃಷ್ಟಿ ಹಾಗೂ ಅನಾವೃಷ್ಟಿಯ ನಿರ್ವಹಣೆಗೆ ಕೇಂದ್ರ ಸರ್ಕಾರದ ಅನುದಾನದ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು)** –

೯೮ (೮೩೩) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಅತಿವೃಷ್ಟಿ ಮತ್ತು ಅನಾವೃಷ್ಟಿಯಿಂದ ತೀವ್ರತರವಾದ ಬರ ಉಂಟಾದಾಗ ಕೇಂದ್ರ ಸರ್ಕಾರ ಅನುದಾನ ನೀಡಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ೨೦೦೮–೦೯ ರಿಂದ ೨೦೧೭–೧೮ರವರೆಗೆ ಕೇಂದ್ರ ಸರ್ಕಾರ ಅತಿವೃಷ್ಟಿ ಮತ್ತು ಅನಾವೃಷ್ಟಿಯಿಂದ ತೀವ್ರತರವಾದ ಬರ ಉಂಟಾದಾಗ ಬಿಡುಗಡೆ ಮಾಡಿದ ಹಣದ ಮೊತ್ತ ಎಷ್ಟು ; ರಾಜ್ಯ ಸರ್ಕಾರ ಮನವಿ ಮಾಡಿದ ಹಣದ ಮೊತ್ತ ಎಷ್ಟು ; ರಾಜ್ಯ ಸರ್ಕಾರ ಖರ್ಚು ಮಾಡಿದ ಹಣ ಎಷ್ಟು ; (ವಿವರವನ್ನು ವರ್ಷಾವಾರು ನೀಡುವುದು)

(ಇ) ಅತಿವೃಷ್ಟಿ ಮತ್ತು ಅನಾವೃಷ್ಟಿಯಿಂದ ತೀವ್ರತರವಾದ ಬರ ನಿರ್ವಹಣೆಗೆ ಕೇಂದ್ರ ಸರ್ಕಾರದ ಮತ್ತು ರಾಜ್ಯ ಸರ್ಕಾರದ ಪಾಲು ಎಷ್ಟು ? (ವಿವರವನ್ನು ವರ್ಷಾವಾರು ನೀಡುವುದು)

## ಕರ್ನಾಟಕ ರಾಜ್ಯದಲ್ಲಿ ಹೊರಗುತ್ತಿಗೆ ಆಧಾರದಲ್ಲಿ ದುಡಿಯುತ್ತಿರುವ ನೌಕರರ ಕುರಿತು

**ಶ್ರೀ ಆರ್. ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)** –

೯೯ (೫೨೯) ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕರ್ನಾಟಕ ರಾಜ್ಯದಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಎಷ್ಟು ಜನ ಕೆಲಸ ಮಾಡುತ್ತಿದ್ದಾರೆ ; (ಇಲಾಖಾವಾರು ಹಾಗೂ ಜಿಲ್ಲಾವಾರು ವಿವರ ನೀಡುವುದು)

(ಆ) ಹೊರಗುತ್ತಿಗೆದಾರರನ್ನು ಪೂರೈಸುತ್ತಿರುವ ಮ್ಯಾನ್‌ಪವರ್ ಏಜೆನ್ಸಿಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ಮ್ಯಾನ್‌ಪವರ್ ಏಜೆನ್ಸಿಗಳು ಹೊರಗುತ್ತಿಗೆದಾರರಾಗಿ ದುಡಿಯುತ್ತಿರುವ ನೌಕರರ ಇಎಸ್‌ಐ ಮತ್ತು ಪಿಎಫ್‌ಗಳನ್ನು ಇಲಾಖೆಗೆ ಜಮಾ ಮಾಡದಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇಂತಹವರ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ಪಶ್ಚಿಮ ವಾಹಿನಿ ಯೋಜನೆಯ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) –**

೧೦೦ (೮೯೫) ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಪಶ್ಚಿಮವಾಹಿನಿ ಯೋಜನೆಗೆ ಎಷ್ಟು ಅನುದಾನ ಬಿಡುಗಡೆಯಾಗಿದೆ ; ಉದ್ದೇಶಿತ ಅನುದಾನ ಎಷ್ಟು ; (ವಿವರ ನೀಡುವುದು)

(ಆ) ಪಶ್ಚಿಮ ವಾಹಿನಿ ಯೋಜನೆಯಡಿಯಲ್ಲಿ ಕೈಗೊಳ್ಳಲು ನಿರ್ಧರಿಸಿದ ಕಾಮಗಾರಿಗಳಾವುವು ; ಈ ಕಾಮಗಾರಿಗಳಿಗೆ ತಗಲುವ ವೆಚ್ಚವೆಷ್ಟು ; ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಸಮಿತಿ ರಚಿಸಲಾಗಿದೆಯೇ ; ಯಾವ ಉದ್ದೇಶಕ್ಕಾಗಿ ಈ ಯೋಜನೆಯನ್ನು ಮಾಡಲಾಗಿದೆ ; ಈ ಬಗ್ಗೆ ಸರ್ಕಾರ ತೆಗೆದುಕೊಂಡ ತೀರ್ಮಾನಗಳಾವುವು ; (ವಿವರ ನೀಡುವುದು)

(ಇ) ಪಶ್ಚಿಮ ವಾಹಿನಿ ಯೋಜನೆ ಯಾವ ಯಾವ ಜಿಲ್ಲೆಗಳಿಗೆ ಅನುಕೂಲವಾಗುವುದು; ಎಷ್ಟು ರೈತರಿಗೆ ಇದರಿಂದ ಪ್ರಯೋಜನ ಸಿಗುವುದು; (ವಿವರ ನೀಡುವುದು)

(ಈ) ಪಶ್ಚಿಮಾಭಿಮುಖವಾಗಿ ಎಷ್ಟು ನದಿಗಳು ಹರಿಯುತ್ತಿವೆ ; ಈ ಯೋಜನೆಯಿಂದ ಸಂಗ್ರಹವಾದ ನೀರಿನ ಪ್ರಮಾಣ ಎಷ್ಟು ? (ವಿವರ ನೀಡುವುದು)

## ಕಲಬುರ್ಗಿಯಲ್ಲಿ 'ಕರ್ನಾಟಕ ಜರ್ಮನ್ ಟೆಕ್ನಿಕಲ್ ಟ್ರೈನಿಂಗ್ ಇನ್‌ಸ್ಟಿಟ್ಯೂಟ್' ಸ್ಥಾಪಿಸುವ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) –**

೧೦೧ (೯೦೩) ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಹೈದ್ರಾಬಾದ್ ಕರ್ನಾಟಕ ಪ್ರದೇಶದ ಯುವಕರಿಗೆ ಕೌಶಲ್ಯಾಭಿವೃದ್ಧಿ ಹಾಗೂ ಉದ್ಯೋಗದ ಅವಕಾಶದ ವೃದ್ಧಿಗಾಗಿ ಕಲಬುರ್ಗಿಯಲ್ಲಿ "ಕರ್ನಾಟಕ ಜರ್ಮನ್

ಟೆಕ್ನಿಕಲ್ ಟ್ರೈನಿಂಗ್ ಇನ್ಸ್ಟಿಟ್ಯೂಟ್" ಸ್ಥಾಪಿಸಲಾಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಸಂಸ್ಥೆಯ ಉದ್ದೇಶ, ಅನುದಾನ ಹಾಗೂ ಚಟುವಟಿಕೆಗಳ ಸವಿವರವಾದ ಮಾಹಿತಿ ನೀಡುವುದು ;

(ಆ) ಸದರಿ ಸಂಸ್ಥೆಗೆ ಮೂಲ ಸೌಕರ್ಯಗಳೊಂದಿಗೆ ಹೊಸ ಕಟ್ಟಡಗಳನ್ನು ಒದಗಿಸಲಾಗಿದೆಯೇ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಸದರಿ ಸಂಸ್ಥೆಗಳಿಗೆ ಗ್ರಂಥಾಲಯ, ಕಾಂಪೌಂಡ್ ಗೋಡೆ ಎಸ್.ಟಿ.ಪಿ. ಸೋಲಾರ್ ವಾಟರ್ ಹೀಟರ್ ಹಾಗೂ ಇತರೆ ಸೌಕರ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಮಾಹಿತಿ ನೀಡುವುದು)

(ಈ) ಸದರಿ ಸಂಸ್ಥೆಗೆ ಎಲ್ಲಾ ಕೊರತೆಗಳನ್ನು ಸರಿಪಡಿಸಿ ಸುಸಜ್ಜಿತ ಸಮುಚ್ಚಯ ನಿರ್ಮಾಣ ಮಾಡಲು ಸರ್ಕಾರ ಮುಂದಾಗುವುದೇ ; ಅನುದಾನದ ಹಂಚಿಕೆಗಳೊಂದಿಗೆ ಯಾವ ಕಾಲಮಿತಿಯೊಳಗೆ ನಿರ್ಮಾಣ ಮಾಡಲಾಗುವುದು?

## ಕಾವೇರಿ ನೀರಾವರಿ ನಿಗಮ ಕುರಿತು

**ಶ್ರೀ ರಮೇಶ ಬಾಬು (ಶಿಕ್ಷಕರ ಕ್ಷೇತ್ರ) –**

೧೦೨ (೮೪೪) ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೨೦೧೩–೧೪ನೇ ಸಾಲಿನಿಂದ ಇಲ್ಲಿಯವರೆಗೆ ಕಾವೇರಿ ನೀರಾವರಿ ನಿಗಮದ ವ್ಯಾಪ್ತಿಯಲ್ಲಿ ತುಮಕೂರು ಜಿಲ್ಲೆಯ ವ್ಯಾಪ್ತಿಯಲ್ಲಿ ಯಾವ ಯಾವ ಯೋಜನೆಯಲ್ಲಿ ಅನುದಾನವನ್ನು ಮಂಜೂರು ಮಾಡಲಾಗಿದೆ ; ಯಾವ ಯಾವ ಕಾಮಗಾರಿಗಳನ್ನು ಇಲ್ಲಿಯವರೆಗೆ ಕೈಗೊಳ್ಳಲಾಗಿದೆ ; ಇದಕ್ಕೆ ಬಿಡುಗಡೆಯಾಗಿರುವ ಹಣ ಎಷ್ಟು ಮತ್ತು ಬಾಕಿ ಇರುವ ಹಣ ಎಷ್ಟು ; (ವರ್ಷಾವಾರು ಮತ್ತು ಕಾಮಗಾರಿವಾರು ಪೂರ್ಣ ವಿವರ ನೀಡುವುದು)

(ಆ) ೨೦೧೩–೧೪ನೇ ಸಾಲಿನಿಂದ ಇಲ್ಲಿಯವರೆಗೆ ಭಾರಿ ಮತ್ತು ಮಧ್ಯಮ ನೀರಾವರಿ ಇಲಾಖೆಯ ಮುಖಾಂತರ ತುಮಕೂರು ಜಿಲ್ಲೆಯಲ್ಲಿ ಯಾವ ಯಾವ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ ; ಇವುಗಳಿಗೆ ನೀಡಿರುವ ಅನುದಾನ ಎಷ್ಟು ; ಬಿಡುಗಡೆಯಾಗಿರುವ ಹಣ ಎಷ್ಟು ; ಬಿಡುಗಡೆಗೆ ಬಾಕಿಯಿರುವ ಹಣ ಎಷ್ಟು ; ಯಾವ ಯಾವ ಕಾಮಗಾರಿಗಳು ಪೂರ್ಣಗೊಂಡಿವೆ ಮತ್ತು ಬಾಕಿ ಇವೆ ; (ಪೂರ್ಣ ವಿವರಗಳನ್ನು ನೀಡುವುದು)

(ಇ) ೨೦೧೩–೧೪ನೇ ಸಾಲಿನಿಂದ ತುಮಕೂರು ಜಿಲ್ಲೆಯಲ್ಲಿ ಭಾರಿ ಮತ್ತು ಮಧ್ಯಮ ನೀರಾವರಿ ಯೋಜನೆಗಳಿಗೆ ಅವಶ್ಯಕತೆಯಿದ್ದ ಭೂಮಿಯ ಪ್ರಮಾಣ ಎಷ್ಟು; ಇದರಲ್ಲಿ ಎಷ್ಟು ಭೂಮಿಗೆ ಪ್ರಾಥಮಿಕ ಹಾಗೂ ಅಂತಿಮ ಅಧಿಸೂಚನೆ ಹೊರಡಿಸಲಾಗಿದೆ ; ಭೂ ಮಾಲೀಕರಿಗೆ ನೀಡಿರುವ ಪರಿಹಾರ ಧನ ಎಷ್ಟು; ಬಾಕಿಯಿರುವ ಪರಿಹಾರ ಧನ ಎಷ್ಟು ; (ತಾಲ್ಲೂಕುವಾರು ಪೂರ್ಣವಾದ ಹಾಗೂ ಹೆಸರು ಸಹಿತವಾದ ಮಾಹಿತಿ ನೀಡುವುದು)

(ಈ) ಕಾವೇರಿ ನೀರಾವರಿ ನಿಗಮದ ಮೂಲಕ ಹೇಮಾವತಿ ನಾಲಾ ವಲಯದಲ್ಲಿ ಚಿಕ್ಕನಾಯಕನಹಳ್ಳಿಗೆ ಕುಡಿಯುವ ನೀರನ್ನು ಪೂರೈಸಲು ಕಿಬ್ಬನಹಳ್ಳಿ ಗ್ರಾಮದ ಮೂಲಕವಾಗಿ ಹಾದು ಹೋಗಿರುವ ಪೈಪ್‌ಲೈನ್‌ಗೆ ಎಷ್ಟು ಅನುದಾನ ನೀಡಲಾಗಿದೆ ; ಬಿಡುಗಡೆ ಆಗಿರುವ ಅನುದಾನ ಎಷ್ಟು ; ಎಷ್ಟು ಭೂಮಿಯನ್ನು ಭೂಸ್ವಾಧೀನ ಮಾಡಿಕೊಳ್ಳಲಾಗಿದೆ ; ಸದರಿ ಭೂಮಿಗೆ ಅಂತಿಮ ಅಧಿಸೂಚನೆ ಯಾವಾಗ ನೀಡಲಾಗಿದೆ ; ರೈತರಿಗೆ ಎಷ್ಟು ಪರಿಹಾರ ನೀಡಲಾಗಿದೆ ? (ಅಧಿಸೂಚನೆ ಸಹಿತವಾಗಿ ರೈತರ ಮತ್ತು ಹಣದ ಪೂರ್ಣ ಮಾಹಿತಿ ನೀಡುವುದು)

## ಕಲಬುರಗಿ ಜಿಲ್ಲೆಯ ಚಿತ್ತಾಪುರ ತಾಲ್ಲೂಕಿನ ಬೆಣ್ಣೆತೊರೆ ನೀರಾವರಿ ಯೋಜನೆಯ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೦೩ (೮೩೮) ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಲಬುರಗಿ ಜಿಲ್ಲೆಯ ಚಿತ್ತಾಪುರ ತಾಲ್ಲೂಕಿನ ಬೆಣ್ಣೆತೊರೆ ನೀರಾವರಿ ಯೋಜನೆಯ ಕಾಲುವೆಗಳ ಆಧುನೀಕರಣಕ್ಕಾಗಿ ರಾಜ್ಯ ಸರ್ಕಾರ ಅನುದಾನ ಬಿಡುಗಡೆ ಮಾಡಿದೆಯೇ ;

(ಆ) ಈಗಾಗಲೇ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; ಇದುವರೆಗೂ ಆಗಿರುವ ಖರ್ಚು ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಇ) ಈ ಯೋಜನೆಯಿಂದ ಯಾವ ಯಾವ ತಾಲ್ಲೂಕಿಗೆ ಎಷ್ಟು ಎಕರೆ ಪ್ರದೇಶಕ್ಕೆ ನೀರಾವರಿ ಸೌಲಭ್ಯ ದೊರೆಯಲಿದೆ ; (ವಿವರ ನೀಡುವುದು)

(ಈ) ಈ ಯೋಜನೆಗಿಂತ ಮೊದಲು ಎಷ್ಟು ಎಕರೆಗೆ ನೀರಾವರಿ ಸೌಲಭ್ಯ ದೊರೆಯುತ್ತಿತ್ತು ; ಕಾಲುವೆಗಳ ಆಧುನೀಕರಣದ ನಂತರ ಎಷ್ಟು ಜಮೀನಿಗೆ ನೀರಾವರಿ ಸೌಲಭ್ಯ ದೊರೆಯಲಿದೆ ? (ವಿವರ ನೀಡುವುದು)

## ಸಾಮಾಜಿಕ ಪರಿಣಾಮ ನಿರ್ಧರಣೆಯ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೧೦೪ (೪೪೩) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಹೊಸ ಭೂಸ್ವಾಧೀನ ಕಾಯ್ದೆ ಅನ್ವಯ ಸಾಮಾಜಿಕ ಪರಿಣಾಮ ನಿರ್ಧರಣೆ (S.I.A.)ಯನ್ನು ಯಾವ ಯಾವ ಭೂ ಸ್ವಾಧೀನ ಜಮೀನುಗಳಿಗೆ ಅನ್ವಯಿಸಲಾಗಿದೆ ; ಇದರಿಂದ ಯಾವ ವಿವಿಧ ಭೂಸ್ವಾಧೀನ ಜಮೀನುಗಳು ವಿನಾಯಿತಿ ಪಡೆದಿರುತ್ತವೆ ; (ವಿವರವಾರ ಮಾಹಿತಿ ಕೊಡುವುದು)

(ಆ) ರಾಜ್ಯದಲ್ಲಿ (S.I.A.)ಯನ್ನು ಕಾರ್ಯಗತಗೊಳಿಸಲು ನೋಂದಾವಣೆ (ಎಂಪ್ಲಾಲ್‌ಮೆಂಟ್) ಆದ ಎನ್.ಜಿ.ಓ.ಗಳ ಸಂಖ್ಯೆ ಎಷ್ಟು ; ವಿಳಾಸ, ನೋಂದಾವಣೆಯಾದ ದಿನಾಂಕದೊಂದಿಗೆ ವಿವರವಾದ ಮಾಹಿತಿ ನೀಡುವುದು;

(ಇ) ಕರ್ನಾಟಕ ರಾಜ್ಯ ಟ್ರಸ್ಟ್ ಆಕ್ಟ್‌ಯಡಿ ನೋಂದಾವಣೆಯಾದ ಟ್ರಸ್ಟ್ ಸಂಸ್ಥೆಗಳು ಆರ್ & ಆರ್ ಆಕ್ಟ್ ೨೦೧೩ರ ಪ್ರಕಾರ ಎಂಪ್ಲಾಲ್‌ಮೆಂಟ್/ನೋಂದಣಿ ಮಾಡಲು ಪ್ರಾವಿಧಾನವಿದೆಯೇ ; (ವಿವರವಾದ ಮಾಹಿತಿ ಕೊಡುವುದು)

(ಈ) ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯಡಿ ಇಲ್ಲಿಯವರೆಗೆ ಎಷ್ಟು ಎಸ್.ಐ.ಎ. ಕಾರ್ಯಕ್ರಮಗಳನ್ನು ನಡೆಸಲಾಗಿದೆ ; ಎಷ್ಟು ಹಣ ಬಿಡುಗಡೆಗೊಳಿಸಲಾಗಿದೆ ವಿವರವಾಗಿ ಸಂಸ್ಥೆಯ ಹೆಸರು ಕಾರ್ಯಕ್ರಮದ ಪ್ರಗತಿಯ ವಿವರ ಹಾಗೂ ಬಿಡುಗಡೆಗೊಳಿಸಿದ ಹಣದೊಂದಿಗೆ ಮಾಹಿತಿ ನೀಡುವುದು ;

(ಉ) ತುಮಕೂರು/ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವ್ಯಾಪ್ತಿಯಲ್ಲಿ ಇಲ್ಲಿಯವರೆಗೆ ಎಷ್ಟು ಎಸ್.ಐ.ಎ. ಕಾರ್ಯಕ್ರಮಗಳನ್ನು ಅನುಷ್ಠಾನ ಮಾಡಲಾಗಿದೆ ಮತ್ತು ಎಷ್ಟು ಸಂಸ್ಥೆಯ ಎಸ್.ಐ.ಎ. ವರದಿಯನ್ನು ತಜ್ಞರ ತಂಡ ಇಲ್ಲಿಯವರೆಗೆ ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತದೆ ; ಹಾಗೂ ವಿಳಂಬವಾಗಲು ಕಾರಣವೇನು?

## ಕೊಟಬಾಗಿ ಏತ ನೀರಾವರಿ ಯೋಜನೆ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೦೫ (೮೩೫) ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಳಗಾವಿ ಜಿಲ್ಲೆಯ ನಾಗರಮುನ್ನೋಲಿ ಹೋಬಳಿ ವ್ಯಾಪ್ತಿಯ ಬಹು ನಿರೀಕ್ಷಿತ ಕೊಟಬಾಗಿ ಏತ ನೀರಾವರಿ ಯೋಜನೆ ಜಾರಿಗೆ ಬಂದರೂ, ನೀರು ಸಿಗದೇ, ಜಮೀನು ಕಳೆದುಕೊಂಡ ರೈತರಿಗೆ ಪರಿಹಾರವೂ ಸಿಗದೇ ಈ ಭಾಗದ ರೈತರು ಸಂಕಷ್ಟ ಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸದರಿ ಕೊಟಬಾಗಿ ಏತ ನೀರಾವರಿ ಯೋಜನೆಯು ಜಾರಿಯಾಗಿದ್ದರೂ, ರೈತರ ಜಮೀನುಗಳಿಗೆ ನೀರು ಹರಿಸದೇ ಇರಲು ಕಾರಣಗಳೇನು ; ಈ ಭಾಗದ ರೈತರ ಜಮೀನುಗಳಿಗೆ ನೀರು ಹರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಸದರಿ ಯೋಜನೆಯಿಂದ ರೈತರು ಜಮೀನು ಕಳೆದುಕೊಂಡ ಪ್ರದೇಶದ ಒಟ್ಟು ವಿಸ್ತೀರ್ಣವೆಷ್ಟು ; ಇದರ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳೆಷ್ಟು ; ಎಷ್ಟು ಜನ ರೈತರು ಈ ಯೋಜನೆಯಿಂದ ಸಂಕಷ್ಟಕ್ಕೊಳಗಾಗಿದ್ದಾರೆ ;

(ಈ) ನೀರಾವರಿ ಯೋಜನೆಯು ಮರೀಚಿಕೆಯಾಗಿರುವ ಈ ಭಾಗದ ಜನರಿಗೆ ನೀರಾವರಿ ಸೌಲಭ್ಯ ಕಲ್ಪಿಸಲು ಸರ್ಕಾರ ತೆಗೆದುಕೊಳ್ಳುವ ನಿರ್ಧಾರವೇನು ; (ವಿವರ ನೀಡುವುದು)

(ಉ) ಯಾವ ಕಾಲಮಿತಿಯಲ್ಲಿ ಈ ಭಾಗದ ರೈತಾಪಿ ಜನರ ನೀರಾವರಿ ಸೌಲಭ್ಯದ ಆಶೋತ್ತರಗಳನ್ನು ಈಡೇರಿಸಲಾಗುವುದು ?

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ (ಪ್ರ)
ಕರ್ನಾಟಕ ವಿಧಾನ ಪರಿಷತ್ತು.

ಸರ್ಕಾರಿ ಮುದ್ರಣಾಲಯ, ವಿಕಾಸಸೌಧ, ಬೆಂಗಳೂರು. ಪಿ7. ಕಾ.ಸೂ. 974, ಪ್ರತಿಗಳು 1500